ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–306

**28 ಅಕ್ಟೋಬರ್ 2023 * ಶನಿವಾರ * ಸಂಜೆ 6.00**

**ಸ್ಥಳ : ನಂ. 1015, ಜೆಎಸ್‌ಎಸ್ ಬಡಾವಣೆ 2ನೇ ಹಂತ, ಮೈಸೂರು**

---

ದಿವ್ಯ ಆಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

ಅಧ್ಯಕ್ಷತೆ

**ಶ್ರೀ ಎನ್. ಶೇಖರ್**

ವಿಶ್ರಾಂತ ಪ್ರಾಂಶುಪಾಲರು, ಮೈಸೂರು

ಉಪನ್ಯಾಸ

**ಡಾ. ಎಸ್.ಪಿ. ಉಮಾದೇವಿ**

ವಿಶ್ರಾಂತ ಸಹ ಪ್ರಾಧ್ಯಾಪಕರು ಹಾಗೂ ಸಾಹಿತಿಗಳು, ಮೈಸೂರು

**ವಿಷಯ : ಶರಣರ ವಚನಗಳಲ್ಲಿ ಅರಿವಿನ ಕಲ್ಪನೆ**

ಭಜನೆ

ಶ್ರೀ ಶಿವರಾತ್ರೀಶ್ವರ ಭಜನಾ ಮಂಡಳಿ ಮತ್ತು ಲಲಿತಾದ್ರಿ ಮಹಿಳಾ ಬಳಗ

ಜೆಎಸ್‌ಎಸ್ ಬಡಾವಣೆ, 2ನೇ ಹಂತ, ಮೈಸೂರು

---

**ಪ್ರಾಯೋಜಕರು**

**ಶ್ರೀಮತಿ ಬಿ. ಮಂಜುಳ ಮತ್ತು ಶ್ರೀ ಟಿ.ಎನ್. ಗಿರೀಶ್**

ನಂ. 1015, ಜೆಎಸ್‌ಎಸ್ ಬಡಾವಣೆ 2ನೇ ಹಂತ, ಮೈಸೂರು

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದ್ದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮ ವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಎನ್. ಶೇಖರ್‌ರವರು** ಬೆಂಗಳೂರು ವಿಶ್ವವಿದ್ಯಾಲಯದ ಎಂಕಾಂ ಪದವೀಧರರು. ಜೆಎಸ್‌ಎಸ್ ಪಾಲಿಟೆಕ್ನಿಕ್‌ಗಳಲ್ಲಿ ಉಪನ್ಯಾಸಕರಾಗಿ ಮತ್ತು ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿರುವರು. ಜೆಎಸ್‌ಎಸ್ ಕನ್ಸಲ್‌ಟಂಟ್ಸ್, ರುಡ್‌ಸೆಟ್, ಅರ್ಬನ್ ಹಾತ್, ಸುಧಾರಿತ ಯೋಗ ಚಿಕಿತ್ಸೆ ಮತ್ತು ಸಂಶೋಧನಾ ಕೇಂದ್ರಗಳಲ್ಲಿಯೂ ಕಾರ್ಯನಿರ್ವಹಿಸಿದ್ದಾರೆ. ವಿಶ್ವ ಬ್ಯಾಂಕ್ ಮತ್ತು ಯುನಿಸೆಫ್ ಸೇರಿದಂತೆ ಹಲವಾರು ಸಂಸ್ಥೆಗಳ ಸಂಶೋಧನಾ ಯೋಜನೆಗಳಲ್ಲಿ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದಾರೆ.

**ಡಾ. ಎಸ್.ಪಿ. ಉಮಾದೇವಿಯವರು** ಮೈಸೂರು ವಿಶ್ವವಿದ್ಯಾನಿಲಯದಿಂದ ಚಿನ್ನದ ಪದಕದೊಂದಿಗೆ ಎಂಎ ಮತ್ತು ಪಿಎಚ್‌ಡಿ ಪಡೆದಿರುವರು. ಜೆಎಸ್‌ಎಸ್ ಕಾಲೇಜುಗಳಲ್ಲಿ ಕನ್ನಡ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಉತ್ತಮ ಬರಹಗಾರರು, ಗಾಯಕರು ಮತ್ತು ವಾಗ್ಮಿಗಳು. ಅನಾವರಣ, ಮೌನ ದನಿಯ ಮಾತು, ಅಕ್ಷತೆ, ಅನುಸಂಧಾನ ಸೇರಿದಂತೆ ವಿವಿಧ ಕೃತಿಗಳನ್ನು ರಚಿಸಿದ್ದಾರೆ. ಪತ್ರಿಕೆ ಮತ್ತು ನಿಯತಕಾಲಿಕೆಗಳಲ್ಲಿ ಇವರ ಹಲವಾರು ಲೇಖನಗಳು ಪ್ರಕಟಗೊಂಡಿವೆ. ಆಕಾಶವಾಣಿ ಮತ್ತು ದೂರದರ್ಶನಗಳ ಚಿಂತನ ಮತ್ತು ಕವಿಗೋಷ್ಠಿ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡಿದ್ದಾರೆ.

**ಶ್ರೀ ಟಿ.ಎನ್. ಗಿರೀಶ್‌ರವರು** ನಂಜನಗೂಡು ತಾಲ್ಲೂಕು ತಾಯೂರಿನವರು. ನಂಜನಗೂಡು ಜೆಎಸ್‌ಎಸ್ ಪಾಲಿಟೆಕ್ನಿಕ್‌ನಲ್ಲಿ ಇನ್ಸ್‌ಟ್ರಕ್ಟರ್‌ರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಧರ್ಮಪತ್ನಿ ಶ್ರೀಮತಿ ಬಿ. ಮಂಜುಳರವರು ಗೃಹಿಣಿ. ಪುತ್ರರಾದ ಕು. ಟಿ.ಜಿ. ಪ್ರೀತಮ್‌ರವರು ಡಿಪ್ಲೊಮಾ ವ್ಯಾಸಂಗ ಮಾಡುತ್ತಿದ್ದಾರೆ.